# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀಮತಿ ನರಸಮ್ಮ ಅಧ್ಯಕ್ಷರು, ಮತ್ತು ಶ್ರೀ ಬಿ. ರಾಮೇಗೌಡ ಉಪಾಧ್ಯಕ್ಷರು, ಬ್ಯಾಡರಹಳ್ಳಿ ಗ್ರಾಮ ಪಂಚಾಯತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

ಓದಲಾಗಿದೆ:

1. ಶ್ರೀ ರಾಘವೇಂದ್ರ ರಾವ್ ಮತ್ತು ಇತರೇ ಸದಸ್ಯರುಗಳು, ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ, ಹೆಬ್ಬಾಳು ಹೋಬಳಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ರವರುಗಳು 23.02.2018ರಂದು ಸರ್ಕಾರಕ್ಕೆ ಸಲ್ಲಿಸಿರುವ ದೂರು ಅರ್ಜಿ.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಮೈಸೂರು ಇವರ ಪತ್ರ ಸಂ:ಡಿಇವಿ.6/15/2018-19/18747, ದಿನಾಂಕ: 18.07.2018.
3. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ:232:ಗ್ರಾಪಂಅ:2018, ದಿನಾಂಕ:14.08.2018 ಕಾರಣ ಕೇಳುವ ನೋಟಿಸ್.
4. ಶ್ರೀಮತಿ ನರಸಮ್ಮ ಅಧ್ಯಕ್ಷರು, ಮತ್ತು ಶ್ರೀ ಬಿ. ರಾಮೇಗೌಡ ಉಪಾಧ್ಯಕ್ಷರು, ಬ್ಯಾಡರಹಳ್ಳಿ ಗ್ರಾಮ ಪಂಚಾಯತಿ, ಇವರು ಕಾರಣ ಕೇಳುವ ನೋಟಿಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ:03.09.2018.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಶ್ರೀಮತಿ ನರಸಮ್ಮ ಅಧ್ಯಕ್ಷರು, ಮತ್ತು ಶ್ರೀ ಬಿ. ರಾಮೇಗೌಡ ಉಪಾಧ್ಯಕ್ಷರು, ಬ್ಯಾಡರಹಳ್ಳಿ ಗ್ರಾಮ ಪಂಚಾಯತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ಇವರುಗಳು ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ 2016-17ನೇ ಸಾಲಿನ 14ನೇ ಹಣಕಾಸು ಯೋಜನೆಯ ಹಣ ದುರುಪಯೋಗ ಮತ್ತು ಅಧಿಕಾರ ದುರುಪಯೋಗಪಡಿಸಿಕೊಂಡಿರುವುದರಿಂದ ಇವರುಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಕೋರಿ ಸರ್ಕಾರಕ್ಕೆ ದೂರು ಸಲ್ಲಿಸಿರುತ್ತಾರೆ ಸದರಿ ದೂರಿಗೆ ಸಂಬಂಧಿಸಿದಂತೆ ವರದಿ ನೀಡುವಂತೆ ಸರ್ಕಾರದ ಪತ್ರ ದಿನಾಂಕ: 24.03.2018ರಂದು ತಿಳಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಮೈಸೂರು ರವರು ದಿನಾಂಕ:18.07.2018 ರಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ರವರು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು, ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ, ರವರುಗಳ ವಿರುದ್ಧ ಮಾಡಿರುವ ಆರೋಪಗಳಿಗೆ ಸಂಬಂಧಿಸಿದಂತೆ ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಎಲ್ಲಾ ಕ್ರಮಬದ್ಧವಾಗಿ, ನಿಯಮಾನುಸಾರವಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ಯಾವುದೇ ಅಕ್ರಮವಾಗಿರುವುದಿಲ್ಲವೆಂದು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕೆ.ಆರ್.ನಗರ ರವರ ವರದಿಯನ್ನು ಲಗತ್ತಿಸಿ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ಸದರಿಯವರ ಕಾರಣ ಕೇಳುವ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ಈ ಕೆಳಕಂಡಂತೆ ಉತ್ತರ ಸಲ್ಲಿಸಿರುತ್ತಾರೆ.

- ಬ್ಯಾಡರಹಳ್ಳಿ ಗ್ರಾಮ ಪಂಚಾಯತಿಯಲ್ಲಿ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಸತಿ-ಪತಿಗಳಾಗಿದ್ದು, ನಿಯಮಾನುಸಾರ ಅಧ್ಯಕ್ಷರು ಕರ್ತವ್ಯಗಳನ್ನು ಮಾಡಿರುತ್ತೇವೆ. ದಾಖಲಾತಿಗಳನ್ನು ಪರಿಶೀಲಿಸಲಾಗಿ ಎಲ್ಲಾ ಸದಸ್ಯರುಗಳಿಗೆ ಮನ್ನಣೆ ಸಿಕ್ಕಿರುತ್ತದೆ ಮತ್ತು ತಾ.ಪಂ.ಕಾರ್ಯನಿರ್ವಾಹಕ ಅಧಿಕಾರಿಯವರು ಅದನ್ನು ಪರಿಶೀಲಿಸಿ ವರದಿಯನ್ನು ಕಳುಹಿಸಿರುತ್ತಾರೆ ಮತ್ತು ಜಿಲ್ಲಾ ಪಂಚಾಯತಿಯವರು ಪರಿಶೀಲಿಸಲಾಗಿ, ನಮ್ಮಗಳ ಕಡೆಯಿಂದ ಏನೂ ಇರುವುದಿಲ್ಲವೆಂದು ಎಲ್ಲಾ ಸರಿಯಾಗಿರುತ್ತದೆ ಎಂದು ವರದಿ ನೀಡಿರುತ್ತಾರೆ ಮತ್ತು ಖುಷ್ಕಿ ಸ.ನಂ.209 ಮತ್ತು 211ರ ಜಮೀನಿನ ತಮ್ಮ ಜಮೀನು ಎಲ್ಲರಿಗೂ ಓಡಾಡಲು ಅನುಕೂಲವಾಗಿರುತ್ತದೆ ಮತ್ತು ಇದರಲ್ಲಿ ನಮ್ಮದು ಏನು ತಪ್ಪು ಇರುವುದಿಲ್ಲ ಇದನ್ನು ಪರಿಗಣಿಸಿ ತಾವು ಇದರಲ್ಲಿ ನಮ್ಮಗಳದು ಏನೂ ತಪ್ಪಿರುವುದಿಲ್ಲವೆಂದು ಪರಿಗಣಿಸಬೇಕೆಂದು ಕೋರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ರವರು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು, ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ, ರವರುಗಳ ವಿರುದ್ಧ ಮಾಡಿರುವ ಆರೋಪಗಳಿಗೆ ಸಂಬಂಧಿಸಿದಂತೆ ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಎಲ್ಲಾ ಕ್ರಮಬದ್ಧವಾಗಿ, ನಿಯಮಾನುಸಾರವಾಗಿ ಕರ್ತವ್ಯ ನಿರ್ವಹಿಸುತ್ತದ್ದು, ಯಾವುದೇ ಅಕ್ರಮವಾಗಿರುವುದಿಲ್ಲವೆಂದು ಸರ್ಕಾರಕ್ಕೆ ಸಲ್ಲಿಸಿರುವ ವರದಿಯನ್ನು ಒಪ್ಪಬಹುದಾಗಿದೆ.

ಸರ್ಕಾರವು ಲಭ್ಯವಿರುವ ಎಲ್ಲಾ ಸಾಕ್ಷ್ಯಾಧಾರಗಳು, ದಾಖಲಾತಿಗಳು, ಆಪಾದಿತರ ಲಿಖಿತ ಹೇಳಿಕೆಗಳನ್ನು ಪರಿಶೀಲಿಸಿ, ಲಭ್ಯವಿರುವ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಶ್ರೀಮತಿ ನರಸಮ್ಮ ಅಧ್ಯಕ್ಷರು, ಮತ್ತು ಶ್ರೀ ಬಿ. ರಾಮೇಗೌಡ ಉಪಾಧ್ಯಕ್ಷರು, ಬ್ಯಾಡರಹಳ್ಳಿ ಗ್ರಾಮ ಪಂಚಾಯತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ರವರು ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಎಲ್ಲಾ ಕಾಮಗಾರಿಗಳನ್ನು ಕ್ರಮಬದ್ಧವಾಗಿ, ನಿಯಮಾನುಸಾರವಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ಯಾವುದೇ ಅಕ್ರಮವಾಗಿರುವುದಿಲ್ಲದಿರುವುದು ಸಾಬೀತಾಗಿರುತ್ತದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/232/ಗ್ರಾಪಂಅ/2018,</u>**
**<u>ಬೆಂಗಳೂರು, ದಿನಾಂಕ: 20.03.2019.</u>**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಲಭ್ಯವಿರುವ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಶ್ರೀಮತಿ ನರಸಮ್ಮ ಅಧ್ಯಕ್ಷರು, ಮತ್ತು ಶ್ರೀ ಬಿ. ರಾಮೇಗೌಡ ಉಪಾಧ್ಯಕ್ಷರು, ಬ್ಯಾಡರಹಳ್ಳಿ ಗ್ರಾಮ ಪಂಚಾಯತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ರವರುಗಳು ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಎಲ್ಲಾ ಕಾಮಗಾರಿಗಳನ್ನು ಕ್ರಮಬದ್ಧವಾಗಿ, ನಿಯಮಾನುಸಾರವಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ಯಾವುದೇ ಅಕ್ರಮವಾಗಿರುವುದಿಲ್ಲದಿರುವುದು ಸಾಬೀತಾಗಿರುತ್ತದೆ ಆದ್ದರಿಂದ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43-ಎ ಮತ್ತು 48(4) ರನ್ವಯ ಪ್ರಕರಣವನ್ನು ಕೈಬಿಟ್ಟು, ಆರೋಪಮುಕ್ತಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್), 20/3/19
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಗೆ:</u>

1) ಜಿಲ್ಲಾಧಿಕಾರಿ ಮೈಸೂರು, ಮೈಸೂರು ಜಿಲ್ಲೆ.
2) ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಮೈಸೂರು ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ.
3) ಕಾರ್ಯನಿರ್ವಾಹಕಾಧಿಕಾರಿ, ಕೆ.ಆರ್.ನಗರ ತಾಲ್ಲೂಕು ಪಂಚಾಯಿತಿ, ಮೈಸೂರು ಜಿಲ್ಲೆ.
4) ಶ್ರೀಮತಿ ನರಸಮ್ಮ ಅಧ್ಯಕ್ಷರು, ಮತ್ತು ಶ್ರೀ ಬಿ. ರಾಮೇಗೌಡ ಉಪಾಧ್ಯಕ್ಷರು, ಬ್ಯಾಡರಹಳ್ಳಿ ಗ್ರಾಮ ಪಂಚಾಯತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ
5) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ.
6) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನಿರ್ದೇಶಕರು(ಪಂ.ರಾಜ್-1), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.